1	2		3	4	5
21	ಜಲಸಂಪನ್ಮೂಲ	ಬಂಡವಾಳ	–	2846.88	2846.88
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು	ರಾಜಸ್ವ	–	3107.30	3107.30
24	ಇಂಧನ	ರಾಜಸ್ವ	–	39683.00	39683.00
		ಬಂಡವಾಳ		2885.00	2885.00
25	ಕನ್ನಡ ಮತ್ತು ಸಂಸ್ಕೃತಿ	ರಾಜಸ್ವ	–	25.00	25.00
	ಒಟ್ಟು	**ರಾಜಸ್ವ**	–	**65415.14**	**65415.14**
		ಬಂಡವಾಳ	–	**16231.95**	**16231.95**
	ಒಟ್ಟು ಮೊತ್ತ		–	**81647.09**	**81647.09**

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2003–2004ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅಗತ್ಯವಿರುವ ಮತ್ತಷ್ಟು ಹಣವನ್ನು ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205ನೇ (1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಎಸ್.ಎಂ. ಕೃಷ್ಣ
ಮುಖ್ಯಮಂತ್ರಿಗಳು ಹಾಗೂ
ಹಣಕಾಸು ಸಚಿವರು

ಟಿ. ರಾಜಣ್ಣ
ಕಾರ್ಯದರ್ಶಿ

ಅನುಬಂಧ II

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ವಿಶ್ವವಿದ್ಯಾಲಯದ ಮಾನ್ಯತೆ

4480 (5257) : ಶ್ರೀ ಎಸ್. ಅಂಗಾರ (ಸೂಳ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ವಿಶ್ವವಿದ್ಯಾಲಯದ ಮಾನ್ಯತೆಯನ್ನು ಪಡೆಯಬೇಕಾದರೆ ಇರುವ ನಿಯಮ ಮತ್ತು ಷರತ್ತುಗಳೇನು? ರಾಜ್ಯ ಸರ್ಕಾರ ಯಾವ ಯಾವ ಕಾಲೇಜುಗಳಿಗೆ ಮಾನ್ಯತೆಯನ್ನು ನೀಡಲು ಕ್ರಮ ಕೈಗೊಂಡಿದೆ. (ವಿವರ ನೀಡುವುದು)

ಡಾ. ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) 2000ದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ 59ನೇ ಪ್ರಕರಣದನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಾನ್ಯತೆ ನೀಡಲಾಗುತ್ತದೆ.

ವಿಶ್ವವಿದ್ಯಾಲಯಗಳು ತಮ್ಮ ವ್ಯಾಪ್ತಿಯ ಕಾಲೇಜುಗಳಿಗೆ ಮಾನ್ಯತೆ ನೀಡುವಾಗ ಮುಖ್ಯವಾಗಿ, ಕಾಲೇಜಿನ ಕಟ್ಟಡ, ಪೀಠೋಪಕರಣಗಳು, ವಿದ್ಯಾರ್ಥಿಗಳ ಸಂಖ್ಯೆ, ಬೋಧಕರ ಸಂಖ್ಯೆ, ಸಿಬ್ಬಂದಿವರ್ಗದ ಸಂಖ್ಯೆ, ಗ್ರಂಥಾಲಯ, ಕ್ರೀಡಾಂಗಣ, ಬೋಧಿಸುವ ವಿಷಯಗಳು ಇಂತಹ ಮೂಲಭೂತ ಸೌಲಭ್ಯಗಳನ್ನು ಗಣನೆಗೆ ತೆಗೆದುಕೊಂಡು ಮಾನ್ಯತೆಯನ್ನು ನೀಡುತ್ತವೆ. ರಾಜ್ಯದಲ್ಲಿ 159 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರಸ್ತುತ ಮಾನ್ಯತೆ ನೀಡಲಾಗಿದೆ.

ಕೊಡಗು ಜಿಲ್ಲೆಯಲ್ಲಿ ಗ್ರಾಮೀಣ ನೀರು ಸರಬರಾಜು ಯೋಜನೆ

4481 (5125) : ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮೀಣ ಪ್ರದೇಶದಲ್ಲಿ ತ್ವರಿತ ನೀರು ಸರಬರಾಜು ಯೋಜನೆಗೆ 2003–04ನೇ ಸಾಲಿನಲ್ಲಿ ಮಂಜೂರಾದ ಹಣ ಎಷ್ಟು; (ಜಿಲ್ಲಾವಾರು ವಿವರ ನೀಡುವುದು);

ಆ) ಈಗಾಗಲೇ ಎಷ್ಟು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ;

ಇ) ಕೊಡಗು ಜಿಲ್ಲೆಯ ಕಾರ್ಯಪ್ರಗತಿ ಯಾವ ಹಂತದಲ್ಲಿದೆ; ಇದಕ್ಕಾಗಿ ನಿಗಧಿಪಡಿಸಿದ ಹಣ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ಸಚಿವರು)

ಅ) ಜಿಲ್ಲಾವಾರು ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಆ) ರಾಜ್ಯದ 3 ವಲಯ ಸುಧಾರಣಾ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ 24 ಜಿಲ್ಲೆಗಳಲ್ಲಿ ಈ ಯೋಜನೆ ಅನುಷ್ಠಾನದಲ್ಲಿದೆ.

ಇ) 2003–04ನೇ ಸಾಲಿನ ಆಯವ್ಯಯದಲ್ಲಿ ತ್ವರಿತ ಗ್ರಾಮೀಣ ನೀರು ಸರಬರಾಜು ಯೋಜನೆಯಡಿ ರೂ. 192.50 ಲಕ್ಷಗಳನ್ನು ಕೊಡಗು ಜಿಲ್ಲೆಗೆ ಒದಗಿಸಲಾಗಿದೆ. ತಾಲ್ಲೂಕುವಾರು ವಿವರಗಳು ಕೆಳಕಂಡಂತೆ ಇವೆ.

ಕ್ರಮ ಸಂಖ್ಯೆ	ತಾಲ್ಲೂಕು	ನಿಗದಿಪಡಿಸಲಾದ ಅನುದಾನ (ರೂ. ಲಕ್ಷಗಳಲ್ಲಿ)	
1.	ಮಡಿಕೇರಿ	44.42	
2.	ಸೋಮವಾರಪೇಟೆ	74.04	
3.	ವಿರಾಜಪೇಟೆ	74.04	ನಿರ್ವಹಣಾ
	ಒಟ್ಟು	192.50	ಅನುದಾನ ಹೊರತುಪಡಿಸಿ

ಈ ಯೋಜನೆಯಡಿ ಜೂನ್ ಅಂತ್ಯಕ್ಕೆ ರೂ. 139.40 ಲಕ್ಷ ಬಿಡುಗಡೆಯಾಗಿದ್ದು ರೂ. 37.00 ಲಕ್ಷ ವೆಚ್ಚವಾಗಿದೆ.